ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಎಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027.India
Tel : 080-22221321 / 25
Website : www.ksrtc.in

ಸಂ.ಕರಾಸ:ಕೇಕ:ಆಡಳತ:ಎ1-298: 1158 :2019-20 ದಿನಾಂಕ:18 -02 -2020

# ಸುತ್ತೋಲೆ ಸಂಖ್ಯೆ : 1668

(ಆಡಳತ ಶಾಖೆಯಿಂದ ಹೊರಡಿಸಲಾಗಿದೆ)

**ವಿಷಯ:** ಕರಾರಸಾ ನಿಗಮದ ಎಲ್ಲಾ ಕಛೇರಿಗಳಲ್ಲಿ ಸಾರ್ವಜನಿಕರು ಭೇಟಿ ಮಾಡಲು ಸಂದರ್ಶನ ಸಮಯವನ್ನು ಪಾಲಿಸುವ ಕುರಿತು.

**ಉಲ್ಲೇಖ:** 1. ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 49 ಕತವ 2019 ದಿನಾಂಕ:11-12-2019
2. ಸರ್ಕಾರದ ಸುತ್ತೋಲೆ :ಸಂ:ಟಿಡಿ 221 ಟಿಡಿಎಸ್ 2019 ದಿನಾಂಕ:27-01-2020
3. ಸಕ್ಷಮ ಪ್ರಾಧಿಕಾರಿಗಳ ಆದೇಶ ದಿನಾಂಕ: 13-02-2020

-----

ಸಾರಿಗೆ ಇಲಾಖೆಯ ವ್ಯಾಪ್ತಿಗೆ ಬರುವ ಸಾರಿಗೆ ಇಲಾಖೆ ಹಾಗೂ ಅಧೀನ ನಿಗಮಗಳ ಮುಖ್ಯಸ್ಥರುಗಳು / ಅಧಿಕಾರಿಗಳು ಪ್ರತಿ ದಿನ (ಸಾರ್ವಜನಿಕ ರಜೆ ಹೊರತುಪಡಿಸಿ) ಮಧ್ಯಾಹ್ನ 3:30 ಗಂಟೆಯಿಂದ ಸಂಜೆ 5:30 ಗಂಟೆಯವರೆಗೆ ಸಾರ್ವಜನಿಕರು ಮತ್ತು ಇತರರನ್ನು ಭೇಟಿ ಮಾಡುವ ಸಮಯವನ್ನಾಗಿ ನಿಗದಿಪಡಿಸಿ. ಸಾರ್ವಜನಿಕರ ಭೇಟಿ ಸಮಯದಲ್ಲಿ ಯಾವುದೇ ಸಭೆಗಳನ್ನು ನಡೆಸದೇ ಸಾರ್ವಜನಿಕರ ಭೇಟಿಗೆ ಸಮಾಯಾವಕಾಶ ಕಲ್ಪಿಸಿಕೊಳ್ಳುವಂತೆ ಸರ್ಕಾರದ ಸುತ್ತೋಲೆ ಸಂ:ಟಿಡಿ 221 ಟಿಡಿಎಸ್ 2019 ದಿನಾಂಕ:27.01.2020ರಲ್ಲಿ ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗಿರುತ್ತದೆ.(ಪ್ರತಿ ಲಗತ್ತಿಸಲಾಗಿದೆ)

ಅದರಂತೆ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವ್ಯಾಪ್ತಿಯ ಎಲ್ಲಾ ಕಛೇರಿಗಳಲ್ಲಿ ತುರ್ತು ಕಾರ್ಯಗಳನ್ನು ಹೊರತುಪಡಿಸಿ, ಸಾರ್ವಜನಿಕ ಸಂಪರ್ಕದಲ್ಲಿರುವ ಎಲ್ಲಾ ಅಧಿಕಾರಿಗಳು ಸಾರ್ವಜನಿಕರು ಭೇಟಿ ಮಾಡಲು ಪ್ರತಿದಿನ (ಸಾರ್ವಜನಿಕ ರಜೆ ಹೊರತುಪಡಿಸಿ) ನಿಗದಿಪಡಿಸಿರುವ ಸಂದರ್ಶನ ಸಮಯ **ಮಧ್ಯಾಹ್ನ 3:30 ಗಂಟೆಯಿಂದ ಸಂಜೆ 5:30 ಗಂಟೆಯವರೆಗೆ** ಸಾರ್ವಜನಿಕರ ಭೇಟಿಗೆ ಸಮಯಾವಕಾಶ ಕಲ್ಪಿಸಿಕೊಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಸಂಬಂಧಪಟ್ಟವರೆಲ್ಲರೂ ಮೇಲಿನ ಸೂಚನೆಗಳನ್ನು ಮನದಟ್ಟು ಮಾಡಿಕೊಂಡು, ಅದರಂತೆ ಕ್ರಮ ಕೈಗೊಳ್ಳತಕ್ಕದ್ದು. ಈ ಸುತ್ತೋಲೆಯು ತಕ್ಷಣದಿಂದ ಜಾರಿಗೆ ಬರುತ್ತದೆ.

ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು(ಸಿಬ್ಬಂದಿ)

**ಪ್ರತಿ ಮಾಹಿತಿಗಾಗಿ:**

1. ಅಧ್ಯಕ್ಷರು/ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಆಪ್ತ ಕಾರ್ಯದರ್ಶಿಯವರಿಗೆ.
2. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರಿಗೆ.
3. ವ್ಯವಸ್ಥಾಪಕ ನಿರ್ದೇಶಕರು, ಕರಾರಸಾ ನಿಗಮ ರವರ ಹಿರಿಯ ಆಪ್ತ ಕಾರ್ಯದರ್ಶಿ ರವರಿಗೆ
4. ನಿರ್ದೇಶಕರು(ಸಿ:ಪ)/ನಿರ್ದೇಶಕರು(ಭ:ಜಾ), ಕರಾರಸಾ ನಿಗಮ, ರವರಿಗೆ.

.. 2

KSRTC CNTL
Scanned with CamScanner

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

5. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ವಿಭಾಗೀಯ ಮುಖ್ಯಸ್ಥರುಗಳು /ಕಾರ್ಯವ್ಯವಸ್ಥಾಪಕರು /ಪ್ರಾಂಶುಪಾಲರುಗಳು ಕರಾರಸಾ ನಿಗಮ ರವರುಗಳಿಗೆ ಹಾಗೂ ತಮ್ಮ ಅಧೀನ ಕಛೇರಿಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡುವುದು.
6. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾ ಸಂಸ್ಥೆ/ವಾಕರಸಾ ಸಂಸ್ಥೆ/ಈಕರಸಾ ಸಂಸ್ಥೆ ರವರಿಗೆ.
7. ಮುಖ್ಯ ಭದ್ರತಾ ಮತ್ತು ಜಾಗ್ರತಾಧಿಕಾರಿ, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ. ಸದರಿ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು(ಸಿಬ್ಬಂದಿ) ರವರಿಗೆ ವರದಿ ಸಲ್ಲಿಸುವುದು.
8. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
9. ಪ್ರಧಾನ ಕಛೇರಿ ಪತ್ರ ಕಡತ.

Scanned with CamScanner

131

# ಕರ್ನಾಟಕ ಸರ್ಕಾರ

ಸಂ: ಟಿಡಿ 221 ಟಿಡಿಎಸ್ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:27-01-2020.

## ಸುತ್ತೋಲೆ

ವಿಷಯ: ಸಾರಿಗೆ ಇಲಾಖೆಯ ಪ್ರಾದೇಶಿಕ ಸಾರಿಗೆ ಅಧಿಕಾರಿ ಹಾಗೂ ಇತರೆ ಉನ್ನತ ಅಧಿಕಾರಿಗಳು ಸಾರ್ವಜನಿಕರು ಭೇಟಿ ಮಾಡಲು ನಿಗದಿಪಡಿಸಿರುವ ಸಂದರ್ಶನ ಸಮಯವನ್ನು ಪಾಲಿಸುವ ಬಗ್ಗೆ.

* * * * *

ಸಾರಿಗೆ ಇಲಾಖೆಯ ವ್ಯಾಪ್ತಿಯ ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇಲಾಖೆ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಡಿ. ದೇವರಾಜ್ ಅರಸ್ ಟ್ರಕ್ ಟರ್ಮಿನಲ್ ಲಿ., ಸಂಸ್ಥೆಗಳ ಮುಖ್ಯಸ್ಥರು / ಅಧಿಕಾರಿಗಳು ಪ್ರತಿ ದಿನ (ಸಾರ್ವಜನಿಕ ರಜೆ ಹೊರತುಪಡಿಸಿ) ಮಧ್ಯಾಹ್ನ 3:30 ಗಂಟೆಯಿಂದ 5:30 ಗಂಟೆಯವರೆಗೆ ಸಾರ್ವಜನಿಕರು ಮತ್ತು ಇತರರನ್ನು ಭೇಟಿ ಮಾಡುವ ಸಮಯವನ್ನಾಗಿ ನಿಗದಿಪಡಿಸಲಾಗಿದೆ.

ಆದ್ದರಿಂದ, ಸಾರ್ವಜನಿಕರ ಭೇಟಿ ಸಮಯದಲ್ಲಿ ಯಾವುದೇ ಸಭೆಗಳನ್ನು ನಡೆಸದೇ ಸಾರ್ವಜನಿಕರಿಗೆ ಭೇಟಿ ಮಾಡಲು ಸಮಾಯಾವಕಾಶ ಕಲ್ಪಿಸಿಕೊಳ್ಳುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 49 ಕತವ 2019, ದಿನಾಂಕ:11-12-2019 ರಲ್ಲಿ ಕಟ್ಟುನಿಟ್ಟಿನ ಸೂಚನೆಯನ್ನು ನೀಡಲಾಗಿದೆ.

ಆದ್ದರಿಂದ, ತುರ್ತು ಕಾರ್ಯಗಳನ್ನು ಹೊರತುಪಡಿಸಿ, ಪ್ರಮುಖವಾಗಿ ಸಾರಿಗೆ ಇಲಾಖೆಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಹಾಗೂ ಇತರೆ ಸಾರ್ವಜನಿಕ ಸಂಪರ್ಕದಲ್ಲಿರುವ ಎಲ್ಲಾ ಅಧಿಕಾರಿಗಳು ಸಾರ್ವಜನಿಕರನ್ನು ಭೇಟಿ ಮಾಡಲು ನಿಗಧಿಪಡಿಸಿರುವ ಸಂದರ್ಶನ ಸಮಯದಲ್ಲಿ ಸಾರ್ವಜನಿಕರ ಭೇಟಿಗೆ ಸಮಯವನ್ನು ನೀಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

(ಗೌರವ್ ಗುಪ್ತ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

M.D., PRO
All sections
D(S&V)/D(P&E)/
All HoDs
31/1

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ
ಆವಕ ಶಾಖೆ
ದಿ... 877
3/2/2020

**ಇವರಿಗೆ:**

1. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಶಾಂತಿನಗರ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಆರ್.ಟಿ.ಸಿ. / ಬಿ.ಎಂ.ಟಿ.ಸಿ. / ಎನ್.ಇ.ಆರ್.ಟಿ.ಸಿ./ ಎನ್.ಡಬ್ಲ್ಯೂ.ಆರ್.ಟಿ.ಸಿ./ ಡಿ. ದೇವರಾಜ್ ಅರಸ್ ಟ್ರಕ್ ಟರ್ಮಿನಲ್ ಲಿ.,
3. ಸಾರಿಗೆ ಇಲಾಖೆಯ ಎಲ್ಲಾ ಅಪರ/ಜಂಟಿ/ಉಪ ಸಾರಿಗೆ ಆಯುಕ್ತರು.
4. ಸಾರಿಗೆ ಇಲಾಖೆಯ ಎಲ್ಲಾ ಪ್ರಾದೇಶಿಕ / ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು.
5. ಕಡತ ಪ್ರತಿ/ಹೆಚ್ಚುವರಿ ಪ್ರತಿಗಳು/ಒ.ಡಿ.ಜಿ.ಸಿ. – 7812

Scanned with CamScanner